Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ವಾ.22/ಜೆ.ಸಿ ಉ/ಪಿಆರ್/08/2020-21

ಸಹಾಯಕ ಅಭಿಯಂತರರ ಕಛೇರಿ
ಜೆ.ಸಿ ನಗರ ಉಪವಿಭಾಗ, ಪೂರ್ವ ವಲಯ
ವಿ. ನಾಗೇನಹಳ್ಳಿ, ವಾರ್ಡ್ ನಂ: 22
ಬೆಂಗಳೂರು 560032.
ದಿನಾಂಕ: 05/12/2020

## ದಿನಾಂಕ: 05-12-2020 ರಂದು ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-

**ಸಭೆಗೆ ಹಾಜರಿದ್ದವರು:**

- ಶ್ರೀ. ರಾಮಕೃಷ್ಣರೆಡ್ಡಿ, ಕಾರ್ಯಪಾಲಕ ಅಭಿಯಂತರರು, ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ. ಗುರುಸಿದ್ದಪ್ಪ .ಜಿ, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು, ವಿ. ನಾಗೇನಹಳ್ಳಿ.
- ಶ್ರೀ. ಶಿವನಾಯಕ್, ಕಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀ. ವಿನೋದ್, ಕಂದಾಯ ವಸೂಲಿಗಾರರು
- ಶ್ರೀಮತಿ ಉಷಾರಾಣಿ, ಕಲ್ಯಾಣ ಇಲಾಖೆ
- ಶ್ರೀ. ಡೇವಿಡ್ ಫೆರ್ನಾಡಿಸ್, ವಸತಿ ಸೇವಾಭಿವೃದ್ಧಿ ಸಂಘ ಸದಸ್ಯರು
- ಶ್ರೀ. ರಾಜಶೇಖರ್; ಮಾಜಿ ಪಾಲಿಕೆ ಸದಸ್ಯರು
- ಶ್ರೀ. ಮುನಿರಾಮಣ್ಣ, ನಾಗರೀಕರು
- ಶ್ರೀ. ಅಂಜಾದ್ ಅಹ್ಮದ್, ನಾಗರೀಕರು
- ಶ್ರೀ. ಉದಯ್ ಚಂದನ್, ಕೆ.ಆರ್.ಡ್ಲ್ಯೂ.ಎ ಸದಸ್ಯರು
- ಶ್ರೀ ಚಂದ್ ಪಾಷ, ನಾಗರೀಕರು
- ಶ್ರೀಮತಿ ಹೇಮಲತಾ, ನಾಗರೀಕರು
- ಶ್ರೀ. ಗಂಗಾಧರ್ ಕೆ, ನಾಗರೀಕರು
- ಶ್ರೀ. ಕಲಿಂ ರೆಹಮಾನ್, ನಾಗರೀಕರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಗುರುಸಿದ್ದಪ್ಪ .ಜಿ ರವರು ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ವಾರ್ಡ್ ಸಂಖ್ಯೆ 22ರ ನಾಗರೀಕರು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಸಭೆಯನ್ನು ಪ್ರಾರಂಭಿಸಲಾಯಿತು.

ಶ್ರೀ. ರಾಮಕೃಷ್ಣರೆಡ್ಡಿ, ನೋಡಲ್ ಅಧಿಕಾರಿಗಳು ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು, ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು. ಹಾಗೂ ಕಮಿಟಿ ಕಾರ್ಯದರ್ಶಿಗಳು ಮಾತನಾಡುತ್ತಾ ದಿನಾಂಕ: 21/12/2020 ರಂದು ನಡೆದ ವಾರ್ಡ್ ಸಮಿತಿಯ ನಡವಳಿಗಳನ್ನು ಪುನರಾವಲೋಕನ ಮಾಡಲಾಯಿತು. ಹಿಂದಿನ ಸಭೆಯಲ್ಲಿ ತೆಗೆದುಕೊಂಡಿದ್ದ ತೀರ್ಮಾನಗಳನ್ನು ಕುರಿತು ಈ ದಿನಾಂಕದವರೆಗೆ ನಿರ್ವಹಿಸಿದ ಕೆಲಸಗಳ ಬಗ್ಗೆ ಸದಸ್ಯರುಗಳಿಗೆ ತಿಳಿಸಲಾಯಿತು.

- ಸಭೆಗೆ ಹಾಜರಿದ್ದ ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ಎಮ್.ಓ.ಹೆಚ್. ಇಲಾಖೆ, ಬಿಡ್ಲ್ಯೂಎಸ್ಎಸ್‌ಬಿ ಇಲಾಖೆ, ಬೆಸ್ಕಾಂ ಇಲಾಖೆ, ಮತ್ತು ಟ್ರಾಫಿಕ್‌ಪೋಲೀಸ್ ಇಲಾಖೆಯವರು ಮುಂದಿನ ಸಭೆಯಲ್ಲಿ ತಪ್ಪದೆ ಕಡ್ಡಾಯವಾಗಿ ಹಾಜರಾಗಬೇಕೆಂದು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಬರುವ ಅಡ್ಡರಸ್ತೆ ಮತ್ತು ಮುಖ್ಯರಸೆಗಳಲ್ಲಿ ಕಸವಿಲೇವಾರಿ ಬಗ್ಗೆ ಬದಲಾವಣೆ ತರುವ ಬಗ್ಗೆ ತಿಳಿಸಿದರು.
- ವಾರ್ಡಿನ ರಸ್ತೆಗಳಲ್ಲಿ ಬಿಡ್ಲ್ಯೂಎಸ್ಎಸ್‌ಬಿ ಇಲಾಖೆ ರವರು ನೀರು ಸರಬರಾಜಿನ ಗುಂಡಿಗಳನ್ನು ಅಲ್ಲಲ್ಲಿ ಅಗೆದಿದ್ದು ಅವುಗಳನ್ನು ಕಡ್ಡಾಯವಾಗಿ ಸರಿಪಡಿಸುವಂತೆ ಬಿಡ್ಲ್ಯೂಎಸ್ಎಸ್‌ಬಿ ಅಧಿಕಾರಿಗಳಿಗೆ ತಿಳಿಸುವುದಾಗಿ ಹೇಳಿದರು. ಹಾಗೂ ವಾರ್ಡ್‌ನಲ್ಲಿ ಸಾರ್ವಜನಿಕರಿಂದ ಹೆಚ್ಚುವರಿ ನೀರು ಸರಬರಾಜು ಮಾಡಬೇಕೆಂದು ಮನವಿ ಬಂದಿರುವುದರಿಂದ ಹೆಚ್ಚುವರಿ ನೀರು ಸರಬರಾಜು ಮಾಡಲು ತಿಳಿಸಿದರು.
- ಸಭೆಗೆ ಹಾಜರಿದ್ದ ಶ್ರೀ ರಾಜಶೇಖರ್ .ಎನ್ ಮಾಜಿ ಪಾಲಿಕೆ ಅಧ್ಯಕ್ಷರವರು ಮಾತನಾಡುತ್ತಾ ಎಲ್ಲೆಂದರಲ್ಲಿ ಸಾರ್ವಜನಿಕರು ಕಸ ಹಾಕುವುದನ್ನು ತಡೆಗಟ್ಟಲು ರೂ.2000/- ಮಾನದಂಡಗಳನ್ನು ಕಟ್ಟುವ ಬಗ್ಗೆ ಮತ್ತು ಸ್ವಚ್ಚತೆಯನ್ನು ಕಾಪಾಡುವ ಬಗ್ಗೆ ಚರ್ಚಿಸಲಾಯಿತು.
- ಶ್ರೀ ಗುರುಸಿದ್ದಪ್ಪ .ಜಿ ಸಹಾಯಕ ಅಭಿಯಂತರರು ರವರು ಮಾತನಾಡುತ್ತಾ ಕನಕನಗರದ 12ನೇ ಕ್ರಾಸ್ ಮತ್ತು 10'ಎ' ಕ್ರಾಸ್ ರಸ್ತೆಗಳ ಕಾಮಗಾರಿಯನ್ನು ದುರಸ್ಥಿ ಪಡಿಸುವ ಬಗ್ಗೆ ತಿಳಿಸಿದರು. ಹಾಗೂ ಕನಕನಗರದ 14ನೇ ಕ್ರಾಸ್‌ನಲ್ಲಿರುವ ರಸ್ತೆ ಗುಂಡಿಗಳ ಕಾಮಗಾರಿಗಳನ್ನು ತುರ್ತಾಗಿ ಮುಗಿಸಿರುವ ಬಗ್ಗೆ ತಿಳಿಸಿದರು.

- ಸಭೆಗೆ ಹಾಜರಿದ್ದ ಶ್ರೀಮತಿ ಉಷಾರಾಣಿ ಕಲ್ಯಾಣ ಇಲಾಖೆ ರವರು ಮಾತನಾಡುತ್ತಾ, ಪ್ರತಿ ವಾರ್ಡಿನ ವ್ಯಾಪ್ತಿಗೆ ಇರುವ ಫಲಾನುಭವಗಳನ್ನು ತಿಳಿಸುತ್ತಾ, ಬೀದಿ ವ್ಯಾಪಾರಿಗಳಿಗೆ ಲೆಸೆನ್ಸ್, ಲೋನ್‌ಗಳು ಮತ್ತು ವಿದ್ಯಾರ್ಥಿಗಳಿಗೆ ಮರುಪಾವತಿ ಶುಲ್ಕ ಅರ್ಜಿಗಳ ಬಗ್ಗೆ ಮಾಹಿತಿಯನ್ನು ನೀಡಿದರು.

- ಶ್ರೀ. ಡೇವಿಡ್ ಫೆರ್ನಾಡಿಸ್, ವಸತಿ ಸೇವಾಭಿವೃದ್ಧಿ ಸಂಘ ಸದಸ್ಯರು ಮಾತಜನಾಡುತ್ತಾ, 6ನೇ ಎ ಕ್ರಾಸ್ ಗೋಪಾಲಪ್ಪ ಲೇಔಟ್‌ನಲ್ಲಿ ಬೆಸ್ಕಾಂ ಇಲಾಖೆ ವತಿಯಿಂದ ಕಾಮಗಾರಿಗಳ ರಸ್ತೆಗಳು ಉಬ್ಬುತಗ್ಗುಗಾಳಾಗಿದ್ದು ಇದರಿಂದ ಸಾರ್ವಜನಿಕರು ರಸ್ತೆಗಳಲ್ಲಿ ಸಂಚಾರಿಸಲು ಕಷ್ಟವಾಗಿದ್ದು, ಶೀಘ್ರವಾಗಿ ರಸ್ತೆಗಳನ್ನು ಸರಿಪಡಿಸುವಂತೆ ತಿಳಿಸಿದರು. ಅದಕ್ಕೆ ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ಬೆಸ್ಕಾಂ ಇಲಾಖೆ ಅಧಿಕಾರಿಗಳಿಗೆ ತಿಳಿಸಿ ರಸ್ತೆಗಳನ್ನು ಸರಿಪಡಿಸುವುದಾಗಿ ಸೂಚಿಸಿದರು.

- ಶ್ರೀ. ಶಿವನಾಯಕ್, ಕಿರಿಯ ಆರೋಗ್ಯ ಪರಿವೀಕ್ಷಕರು, ರವರು ಮಾತನಾಡುತ್ತಾ, ರಸ್ತೆಗಳಲ್ಲಿ ಕಸವನ್ನು ಪರಿವೀಕ್ಷಣೆಗೆ ಹೋದಾಗ ಸಾರ್ವಜನಿಕರನ್ನು ಎಲ್ಲೆಂದರಲ್ಲಿ ಕಸಹಾಕುವುದನ್ನು ಪ್ರಶ್ನಿಸಿದಾಗ ಅಲ್ಲಿದ್ದ ಸಾರ್ವಜನಿಕರು ಅಧಿಕಾರಿಗಳ ಮೇಲೆಯೇ ಎದುರು ಮಾತನಾಡಿ ನಿಂದಿಸಿರುವುದನ್ನು ನೋಡೆಲ್ ಅಧಿಕಾರಿಗಳಿಗೆ ತಿಳಿಸಿದರು.

- ವಾರ್ಡ್‌ನಲ್ಲಿ ದಿನಕ್ಕೆ ಸರಾಸರಿ 250 ಕೋವಿಡ್-19 ಪರೀಕ್ಷೆಗಳನ್ನು ನಡೆಯುತ್ತಿದ್ದು, ಎಲ್ಲಾ ಸಾರ್ವಜನಿಕರು ಕೋವಿಡ್ ಪರೀಕ್ಷೆಯಲ್ಲಿ ಭಾಗವಹಿಸಿ ಮತ್ತು ವಾರ್ಡ್‌ನ ಮಟ್ಟದಲ್ಲಿ ಕೋವಿಡ್ ಪರೀಕ್ಷೆ ಯಶ್ವಸಿಯಾಗಿರುವುದನ್ನು ನೋಡೆಲ್ ಅಧಿಕಾರಿಗಳಿಗೆ ತಿಳಿಸಿದರು.

- ಶ್ರೀ ಚಂದ್ ಪಾಷ, ನಾಗರೀಕರು ಮಾತನಾಡುತ್ತಾ, ಕನಕನಗರದ 5ನೇ ಕ್ರಾಸ್‌ನಲ್ಲಿರುವ ಬೋರ್‌ವೆಲ್ ಹಾಳಾಗಿರುವುದರಿಂದ ಈಗಾಗಲೇ ನೋಟೀಸ್ ನೀಡಿರುವುದನ್ನು ತಿಳಿಸುತ್ತಾ ಅದನ್ನು ಸರಿಪಡಿಸುವಂತೆ ತಿಳಿಸಿದರು. ಅದಕ್ಕೆ ಪ್ರತಿಯಾಗಿ ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ಶೀಘ್ರವಾಗಿ ಹಾಳಾಗಿರುವ ಬೋರ್‌ವೆಲ್‌ನ್ನು ಸರಿಪಡಿಸುವುದಾಗಿ ತಿಳಿಸಿದರು.

- ಶ್ರೀ ಮುನಿರಾಮಣ್ಣ, ನಾಗರೀಕರು ಮಾತನಾಡುತ್ತಾ ವಾರ್ಡ್‌ನಲ್ಲಿ ಟ್ರಾಕ್ಟರ್‌ಗಳ ಮೂಲಕ ಕಾಮಗಾರಿಗಳ ಕೆಲಸ ನಡೆಯುತ್ತಿದ್ದು ಶೀಘ್ರವಾಗಿ ಕೆಲಸಗಳನ್ನು ಮುಗಿಸಲು ಹೆಚ್ಚುವರಿ ಟ್ರಾಕ್ಟರ್‌ಗಳನ್ನು ಬಳಸುವಂತೆ ಮನವಿ ಮಾಡಿಕೊಂಡರು. ಹಾಗೂ ರಸ್ತೆಗಳಲ್ಲಿರುವ ಬೋರ್‌ವೆಲ್‌ಗಳನ್ನು Redrill ಮಾಡುವುದರ ಬಗ್ಗೆ ಹೇಳಿದರು.

- ಶ್ರೀ ಅಂಜಾದ್ ಅಹ್ಮದ್ ನಾಗರೀಕರು ಮಾತನಾಡುತ್ತಾ, ಕನಕನಗರದ 16ನೇ, 17ನೇ ಮತ್ತು 18ನೇ ರಸ್ತೆಯಲ್ಲಿ ಹೊಸದಾಗಿ ಅಡ್ಡಮೋರಿಗಳನ್ನು ನಿರ್ಮಿಸುವ ಬಗ್ಗೆ ಸದಸ್ಯರೊಂದಿಗೆ ಚರ್ಚಿಸಲಾಯಿತು.

- ಶ್ರೀ ಕಲೀಲ್ ರೆಹಮಾನ್ ನಾಗರೀಕರು ಮಾತನಾಡುತ್ತಾ, ಕನಕನಗರದಲ್ಲಿರುವ ರಸ್ತೆಗಳಲ್ಲಿ ಎಲ್.ಇ.ಡಿ. ಬೀದಿ ದೀಪಗಳು ಸರಿಯಾಗಿ ಕೆಲಸ ನಿರ್ವಹಿಸುತ್ತಿಲ್ಲವೆಂದು ತಿಳಿಸಿದರು ಅದಕ್ಕೆ ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ಬೆಸ್ಕಾಂ ಅಧಿಕಾರಿಗಳಿಗೆ ತಿಳಿಸಿ ಸರಿಪಡಿಸುವುದಾಗಿ ಹೇಳಿದರು.

- ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ವಾರ್ಡ್‌ನ ರಸ್ತೆಗಳ ಅಲ್ಲಲ್ಲಿ ವಾಹನನಿಲುಗಡೆಯ ಬಗ್ಗೆ ಚರ್ಚಿಸುವುದಾಗಿ ತಿಳಿಸುತ್ತಾ ಹಾಗೂ ಮುಂದಿನ ಸಭೆಯನ್ನು ಬಿಬಿಎಂಪಿ ಕಚೇರಿಯ 2ನೇ ಮಹಡಿಯಲ್ಲಿ ನಡೆಸುವುದಾಗಿ ಹಾಜರಿದ್ದ ಸದಸ್ಯರಿಗೆ ತಿಳಿಸಿದರು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯವನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳ ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಕೈಗೊಂಡ ಕ್ರಮದ ಬಗ್ಗೆ ವರದಿ ಪೂರ್ಣಗೊಂಡ ಭಾವಚಿತ್ರ ಹಾಗೂ ಲಿಖಿತ ವರದಿ ತಯಾರಿಸಿಕೊಂಡು ಹಾಜರಾಗಲು ಸೂಚಿಸಿ ಹಾಗೂ ಹಾಜರಾಗದೇ ಇರುವ ಅಧಿಕಾರಿಗಳು ಮುಂದಿನ ಸಭೆಯಲ್ಲಿ ತಪ್ಪದೆ ಹಾಜರಾಗಿರಬೇಕೆಂದು ಸೂಚಿಸಿದರು. ಸಭೆಯನ್ನು ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಕಾರ್ಯದರ್ಶಿಗಳಾದ ಗುರುಸಿದ್ದಪ್ಪ .ಜಿ ರವರ ವಂದನಾರ್ಪಣೆಯೊಂದಿಗೆ ಮಧ್ಯಾಹ್ನ 12:00ಕ್ಕೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ ರಾಮಕೃಷ್ಣರೆಡ್ಡಿ)
ವಾರ್ಡ್ ಸಮಿತಿ ಅಧ್ಯಕ್ಷರು

(ಗುರುಸಿದ್ದಪ್ಪ .ಜಿ)
ವಾರ್ಡ್ ಸಮಿತಿ ಕಾರ್ಯದರ್ಶಿ
ಮತ್ತು
ಸಹಾಯಕ ಅಭಿಯಂತರರು ವಾರ್ಡ್ ನಂ:22